ಕರ್ನಾಟಕ ಸರ್ಕಾರ

***ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.***

ಸಂಖ್ಯೆ:ಪಪೂಶಿ/ಶೈಶಾ.04/ದಾ.ವೇ.ಶೈ.ಚ/9/2018-19

ದಿನಾಂಕ:01-08-2018

**ಸುತ್ತೋಲೆ**

ವಿಷಯ: ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿಯುಸಿ ತರಗತಿಗೆ ದಾಖಲಾತಿ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿ.

****

2018-19ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಪಿಯುಸಿ ತರಗತಿಗೆ ದಿನಾಂಕ: 04-08-2018ರವರೆಗೆ ವಾರ್ಷಿಕ ಹಾಗೂ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ದಂಡಶುಲ್ಕದೊಂದಿಗೆ(ವಿಶೇಷ ದಂಡ ಶುಲ್ಕ ರೂ.2890/-ಗಳನ್ನು ಪಾವತಿಸಿ ದಾಖಲಾತಿ ಪಡೆಯಲು) ದಾಖಲಾತಿ ದಿನಾಂಕವನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ವಿಸ್ತರಿಸಿ ಆದೇಶಿಸಲಾಗಿದೆ.

ವಿಶೇಷ ಸೂಚನೆ:- ಸೂಚಿತ ದಿನಾಂಕಗಳಲ್ಲಿ ದಾಖಲಾಗುವ ಪ್ರಥಮ ಪಿಯುಸಿ ವಿದ್ಯಾರ್ಥಿಗಳು ಈ ಶೈಕ್ಷಣಿಕ ವರ್ಷದಲ್ಲಿ ವಾರ್ಷಿಕ ಶೇ 75 ರಷ್ಟು ಹಾಜರಾತಿಯನ್ನು ಪಡೆಯುವ ಬಗ್ಗೆ ವಿದ್ಯಾರ್ಥಿಗಳಿಂದ ಮುಚ್ಚಳಿಕೆಯನ್ನು ಕಡ್ಡಾಯವಾಗಿ ಪಡೆದು ದಾಖಲಾತಿಯನ್ನು ನೀಡುವುದು. ಸದರಿ ವಿದ್ಯಾರ್ಥಿಗಳಿಗೆ ರಜಾ ದಿನಗಳಲ್ಲಿ ಹಾಗೂ ಭಾನುವಾರಗಳಲ್ಲಿ ವಿಶೇಷ ತರಗತಿಗಳನ್ನು ನಡೆಸಿ ಇಲ್ಲಿಯವರೆಗೆ ನಷ್ಟವಾಗಿರುವ ಪಾಠಗಳನ್ನು ಸರಿದೂಗಿಸಲು ತಿಳಿಸಿದೆ.

1/8/18

ನಿರ್ದೇಶಕರು,

ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:-

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ- ತಮ್ಮ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಗಮನಕ್ಕೆ ತರಲು ಸೂಚಿಸಿದೆ.
2. ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರ ಮೂಲಕ.
3. ನಿರ್ದೇಶಕರ ಆಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ.
4. ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
5. ಕಛೇರಿ ಪ್ರತಿ.